ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

11

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: [illegible] ದಿನಾಂಕ : DATE : 3/3/21

ಮುನಿರಾಜುಗೌಡ ಬಿಜೆಪಿ ಅಭ್ಯರ್ಥಿ

ಬೆಂಗಳೂರು: ರಾಜ್ಯ ವಿಧಾನ ಪರಿಷತ್ ಒಂದು ಸ್ಥಾನಕ್ಕೆ ನಡೆಯುವ ಉಪ ಚುನಾವಣೆಗೆ ಬಿಜೆಪಿಯಿಂದ ತುಳಸಿ ಮುನಿರಾಜು ಗೌಡ ಅವರನ್ನು ಅಭ್ಯರ್ಥಿಯಾಗಿ ಘೋಷಿಸಲಾಗಿದೆ. ಈ ಆಯ್ಕೆ ಪ್ರಕ್ರಿಯೆ ಸಂಬಂಧ ರಾಜ್ಯ ಬಿಜೆಪಿ ಕೋರ್ ಕಮಿಟಿ ಸಭೆ ನಡೆದಿರಲಿಲ್ಲ. ರಾಜ್ಯ ಘಟಕದ ಅಭಿಪ್ರಾಯ ಪಡೆಯದೆ ಹೈಕಮಾಂಡ್ ಅಭ್ಯರ್ಥಿ ಆಯ್ಕೆ ಮಾಡಿದೆ. ಪರಿಷತ್ ಉಪ ಚುನಾವಣೆಗೆ ನಾಮಪತ್ರ ಸಲ್ಲಿಸಲು ಮಾರ್ಚ್ 4 ಕಡೆಯ ದಿನವಾಗಿದೆ. ಕಾಂಗ್ರೆಸ್, ಜೆಡಿಎಸ್‌ನಿಂದ ಅಭ್ಯರ್ಥಿ ಕಣಕ್ಕಿಳಿಸುವ ಸಾಧ್ಯತೆ ಇಲ್ಲದಿರುವುದರಿಂದ ತುಳಸಿ ಮುನಿರಾಜುಗೌಡ ಅವಿರೋಧ ಆಯ್ಕೆಯಾಗುವ ನಿರೀಕ್ಷೆಯಿದೆ. ತುಳಸಿ ಮುನಿರಾಜು ಗೌಡ ಸದ್ಯಕ್ಕೆ ರಾಜ್ಯ ಬಿಜೆಪಿ ಕಾರ್ಯದರ್ಶಿಯಾಗಿದ್ದಾರೆ. ಕಳೆದ ಬಾರಿ ರಾಜರಾಜೇಶ್ವರಿನಗರ ಉಪ ಚುನಾವಣೆಯಲ್ಲಿ ಮುನಿರತ್ನ ಬದಲು ತಮಗೆ ಟಿಕೆಟ್ ನೀಡುವಂತೆ ಒತ್ತಡ ಹಾಕಿದ್ದರು.